# ಯುನೆಸ್ಕೋ ಅಮೂರ್ತ ಸಾಂಸ್ಕೃತಿಕ ಪರಂಪರೆಯ ಪಟ್ಟಿಗೆ ದೀಪಾವಳಿ ಹಬ್ಬ ಸೇರ್ಪಡೆ

**ಇದೀಗ ಸುದ್ದಿಯಲ್ಲಿದೆ:**

- **ನವದೆಹಲಿಯಲ್ಲಿ** ನಡೆದ ಯುನೆಸ್ಕೋದ **ಅಂತರ-ಸರ್ಕಾರಿ ಸಮಿತಿಯ 20ನೇ ಅಧಿವೇಶನದಲ್ಲಿ**, ದೀಪಾವಳಿ ಹಬ್ಬವನ್ನು ಯುನೆಸ್ಕೋದ 'ಮಾನವೀಯತೆಯ ಅಮೂರ್ತ ಸಾಂಸ್ಕೃತಿಕ ಪರಂಪರೆಯ ಪ್ರತಿನಿಧಿ ಪಟ್ಟಿ'ಗೆ ಸೇರ್ಪಡೆಗೊಳಿಸಲಾಗಿದೆ.
- ಅಮೂರ್ತ ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಗೆ ಯುನೆಸ್ಕೋ ಅಂತರ-ಸರ್ಕಾರಿ ಸಮಿತಿಯ 20ನೇ ಅಧಿವೇಶನವನ್ನು (2025), ಭಾರತವು ನವದೆಹಲಿಯ ಕೆಂಪು ಕೋಟೆ ಸಂಕೀರ್ಣದಲ್ಲಿ ಇತ್ತೀಚಿಗೆ ಆಯೋಜಿಸಿತ್ತು.

## ಯುನೆಸ್ಕೋ, "ಅಮೂರ್ತ" ಪದವನ್ನು ಈ ಕೆಳಗಿನಂತೆ ವ್ಯಾಖ್ಯಾನಿಸುತ್ತದೆ :

- ಒಂದು ಪೀಳಿಗೆಯಿಂದ ಇನ್ನೊಂದು ಪೀಳಿಗೆಗೆ ಹರಿದುಬಂದ ಸಂಪ್ರದಾಯಗಳು.
- ತಮ್ಮ ಪರಿಸರಕ್ಕೆ ಪ್ರತಿಕ್ರಿಯೆಯಾಗಿ ವಿಕಸನಗೊಂಡ ಸಂಪ್ರದಾಯಗಳು.
- ನಮಗೆ ಅಸ್ಮಿತೆ ಮತ್ತು ನಿರಂತರತೆಯ ಪ್ರಜ್ಞೆಯನ್ನು ಒದಗಿಸುವಲ್ಲಿ ಕೊಡುಗೆ ನೀಡಿರುವ ಸಂಪ್ರದಾಯಗಳು.

## ದೀಪಾವಳಿ ಹಬ್ಬದ ಬಗ್ಗೆ

- ಆಚರಣೆ:- ದೀಪಾವಳಿ ಹಬ್ಬವನ್ನು "ದೀವಾಳಿ" ಎಂತಲೂ ಕರೆಯುತ್ತಾರೆ. **ಕಾರ್ತಿಕ ಅಮಾವಾಸ್ಯೆಯಂದು** ಆಚರಿಸಲಾಗುತ್ತದೆ; ಇದು ಸಾಮಾನ್ಯವಾಗಿ ಅಕ್ಟೋಬರ್ ಅಥವಾ ನವೆಂಬರ್ ತಿಂಗಳಲ್ಲಿ ಬರುತ್ತದೆ.
- ಇದರ ಆಚರಣೆಯ ನಂತರ ನರಕ ಚತುರ್ದಶಿಯೂ ಬರುತ್ತದೆ.
- ದೀಪಾವಳಿಯ ಮೂರನೇ ದಿನ ಹಬ್ಬದ ಪ್ರಮುಖ ದಿನವಾಗಿದ್ದು, ಅಂದು ಪವಿತ್ರ ಲಕ್ಷ್ಮಿ-ಗಣೇಶ ಪೂಜೆಯನ್ನು ನೆರವೇರಿಸಲಾಗುತ್ತದೆ.

- ಯುನೆಸ್ಕೋದ ಅಧಿಕೃತ ದಾಖಲೆಯನ್ವಯ, 'ಅಮೂರ್ತ ಸಾಂಸ್ಕೃತಿಕ ಪರಂಪರೆ'ಯು ಈ ಕೆಳಗಿನವುಗಳನ್ನು ಒಳಗೊಂಡಿದೆ: **"ಮೌಖಿಕ ಸಂಪ್ರದಾಯಗಳು, ಪ್ರದರ್ಶನ ಕಲೆಗಳು, ಸಾಮಾಜಿಕ ಆಚರಣೆಗಳು, ವಿಧಿವಿಧಾನಗಳು, ಹಬ್ಬದ ಸಂದರ್ಭಗಳು, ಪ್ರಕೃತಿ ಮತ್ತು ವಿಶ್ವಕ್ಕೆ ಸಂಬಂಧಿಸಿದ ಜ್ಞಾನ ಮತ್ತು ಆಚರಣೆಗಳು ಅಥವಾ ಸಾಂಪ್ರದಾಯಿಕ ಕರಕುಶಲ ವಸ್ತುಗಳನ್ನು ಉತ್ಪಾದಿಸುವ ಜ್ಞಾನ ಮತ್ತು ಕೌಶಲಗಳು."**

## ಯುನೆಸ್ಕೋ ಪ್ರತಿನಿಧಿ ಪಟ್ಟಿಯಲ್ಲಿರುವ ಭಾರತದ 16 ಅಮೂರ್ತ ಸಾಂಸ್ಕೃತಿಕ ಪರಂಪರೆಗಳು

| ಕ್ರ.ಸಂ | ಅಮೂರ್ತ ಸಾಂಸ್ಕೃತಿಕ ಪರಂಪರೆಗಳು | ವರ್ಷ |
|---|---|---|
| 1 | ಕೇರಳದ ಕೂಡಿಯಟ್ಟಂ, ಸಂಸ್ಕೃತ ರಂಗಭೂಮಿ | 2008 |
| 2 | ವೇದ ಮಂತ್ರ ಪಠಣ ಸಂಪ್ರದಾಯ | 2008 |
| 3 | ಉತ್ತರ ಪ್ರದೇಶದ ರಾಮಲೀಲಾ, ರಾಮಾಯಣದ ಸಾಂಪ್ರದಾಯಿಕ ಪ್ರದರ್ಶನ | 2008 |
| 4 | ಗರ್ವಾಲ್ ಹಿಮಾಲಯದ ರಮ್ಮಾನ್, ಧಾರ್ಮಿಕ ಹಬ್ಬ ಮತ್ತು ಧಾರ್ಮಿಕ ರಂಗಭೂಮಿ | 2009 |
| 5 | ಕೇರಳದ ಮುಡಿಯೆಟ್ಟು, ಧಾರ್ಮಿಕ ರಂಗಭೂಮಿ ಮತ್ತು ನೃತ್ಯ ನಾಟಕ | 2010 |
| 6 | ರಾಜಸ್ಥಾನದ "ಕಾಲ್ಬೆಲಿಯಾ" ಜಾನಪದ ಹಾಡುಗಳು ಮತ್ತು ನೃತ್ಯಗಳು | 2010 |
| 7 | ಪಶ್ಚಿಮ ಬಂಗಾಳದ ಛೌ ನೃತ್ಯ | 2010 |
| 8 | ಲಡಾಖ್‌ನ ಬೌದ್ಧ ಮಂತ್ರ ಪಠಣ: ಜಮ್ಮು ಮತ್ತು ಕಾಶ್ಮೀರದ ಹಿಮಾಲಯದಾಚೆಗಿನ ಲಡಾಖ್ ಪ್ರದೇಶದಲ್ಲಿ ಪವಿತ್ರ ಬೌದ್ಧ ಗ್ರಂಥಗಳ ಪಠಣ | 2012 |
| 9 | ಮಣಿಪುರದ ಸಂಕೀರ್ತನೆ | 2013 |
| 10 | ಪಂಜಾಬ್‌ನ ಜಂಡಿಯಾಲ ಗುರುವಿನ 'ತಾಥೇರ'ರ ಸಾಂಪ್ರದಾಯಿಕ ಹಿತ್ತಾಳೆ ಮತ್ತು ತಾಮ್ರದ ಪಾತ್ರೆ ತಯಾರಿಕೆ ಕಲೆ | 2014 |
| 11 | ಯೋಗ | 2016 |
| 12 | ನವರೋಜ್ | 2016 |
| 13 | ಕುಂಭ ಮೇಳ | 2017 |
| 14 | ಕೋಲ್ಕತ್ತಾದ ದುರ್ಗಾ ಪೂಜೆ | 2021 |
| 15 | ಗುಜರಾತಿನ ಗರ್ಬಾ | 2023 |
| **16** | ದೀಪಾವಳಿ | **2025** |